ಕರ್ನಾಟಕ ಸರ್ಕಾರ

**ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

**ಸಂಖ್ಯೆ:-ಎಡಿಎಂ2(4)ಶೌ.ನಿ/01/2023-24.** **ದಿನಾಂಕ: 28.12.2023.**

**-: ಸುತ್ತೋಲೆ:-**

ವಿಷಯ:-ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತೆಯನ್ನು ನಿರ್ವಹಿಸಲು ವಿದ್ಯಾರ್ಥಿಗಳನ್ನು ಬಳಸದಿರುವ ಕುರಿತು ಸೂಚನೆಗಳು.

ಉಲ್ಲೇಖ:- ಈ ಕಛೇರಿಯ ಸುತ್ತೋಲೆ ಸಂಖ್ಯೆ: ಯೋ8/ಕುನಿಶೌಅಬಿ/07/2023-24 ದಿನಾಂಕ: 21.09.2023.

*******

ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಇತ್ತೀಚಿಗೆ ಶಾಲಾ ಮುಖ್ಯ ಶಿಕ್ಷಕರು, ಶಿಕ್ಷಕರು ಶೌಚಾಲಯಗಳನ್ನು ವಿದ್ಯಾರ್ಥಿಗಳಿಂದ ಸ್ವಚ್ಛತೆ ಮಾಡಿಸುತ್ತಿರುವ ಕುರಿತಾದ ಘಟನೆಗಳು ಸರ್ಕಾರದ ಮತ್ತು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಶಾಲೆಗಳಲ್ಲಿ ವಿದ್ಯಾರ್ಥಿಗಳನ್ನು ಶೈಕ್ಷಣಿಕ ಚಟುವಟಿಕೆಗಳಲ್ಲಿ, ಸಹ ಪಠ್ಯ ಚಟುವಟಿಕೆಗಳಲ್ಲಿ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ಮಾತ್ರ ತೊಡಗಿಸಿಕೊಳ್ಳಬೇಕಾಗುತ್ತದೆ. ವಿದ್ಯಾರ್ಥಿಗಳನ್ನು ಶೌಚಾಲಯಗಳ ಸ್ವಚ್ಛತೆಯಂತಹ ಕಾರ್ಯಗಳಿಂದ ದೂರವಿರಿಸುವುದು ಅಧಿಕಾರಿಗಳ, ಮುಖ್ಯ ಶಿಕ್ಷಕರ, ಶಿಕ್ಷಕರ, ಸಿಬ್ಬಂದಿಗಳ ಕರ್ತವ್ಯವಾಗಿರುತ್ತದೆ. ಆದರೆ ಅವರುಗಳು ಈ ಹೊಣೆಗಾರಿಕೆಯನ್ನು ಮರೆತು ವಿದ್ಯಾರ್ಥಿಗಳನ್ನು ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತೆಯಂತಹ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು ಆಕ್ಷೇಪಣೀಯ ಮತ್ತು ಖಂಡನೀಯ. ಇಂತಹ ಘಟನೆಗಳನ್ನು ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ. ಈ ಹಿನ್ನಲೆಯಲ್ಲಿ ರಾಜ್ಯದ ಸರ್ಕಾರಿ ಶಾಲೆಗಳಲ್ಲಿನ ಶೌಚಾಲಯಗಳ ಸ್ವಚ್ಛತೆಯನ್ನು ನಿರ್ವಹಿಸುವ ಕುರಿತು ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಸಂಬಂಧಿಸಿದ ಎಲ್ಲರಿಗೂ ತಿಳಿಸಲಾಗಿದೆ.

1. ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತಾ ಕಾರ್ಯ ಮತ್ತು ನಿರ್ವಹಣೆಯನ್ನು ಯಾವುದೇ ಕಾರಣಕ್ಕೂ, ಯಾವುದೇ ಸಂದರ್ಭದಲ್ಲಿಯೂ ಸಹ ವಿದ್ಯಾರ್ಥಿಗಳಿಂದ ಕೈಗೊಳ್ಳುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.
2. ಉಲ್ಲೇಖಿತ ಸುತ್ತೋಲೆಯ ಅನುಸಾರ ಶಾಲಾ ನಿರ್ವಹಣಾ ಅನುದಾನವನ್ನು ಆಯಾ ಸರ್ಕಾರಿ ಶಾಲೆಗಳಿಗೆ ಪ್ರಸ್ತುತ ಸಾಲಿಗೆ ಈಗಾಗಲೇ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನವನ್ನು ಪ್ರಥಮ ಪ್ರಾಶಸ್ತ್ಯದಲ್ಲಿ ಶೌಚಾಲಯಗಳ ಸ್ವಚ್ಛತಾ ಕಾರ್ಯಗಳಿಗೆ ಬಳಸಿಕೊಂಡು ಆಯಾ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ) ಗಳ ಸಹಕಾರದೊಂದಿಗೆ, ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಶೌಚಾಲಯಗಳ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳತಕ್ಕದ್ದು.
3. ಒಂದು ವೇಳೆ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಶಾಲಾ ಮುಖ್ಯ ಶಿಕ್ಷಕರು, ಶಿಕ್ಷಕರು ಮತ್ತು ಸಿಬ್ಬಂದಿಗಳಾಗಲಿ ವಿದ್ಯಾರ್ಥಿಗಳನ್ನು ಶಾಲಾ ಶೌಚಾಲಯಗಳ ಸ್ವಚ್ಛತೆಗಾಗಿ ಬಳಸಿಕೊಂಡಲ್ಲಿ ಅಂತಹವರ ಮೇಲೆ ಇಲಾಖಾ ವತಿಯಿಂದ ನಿಯಮಾನುಸಾರ ಶಿಸ್ತು ಕ್ರಮಗಳನ್ನು ಜರುಗಿಸಲಾಗುವುದು ಹಾಗೂ ಪ್ರಥಮ ವರ್ತಮಾನ ವರದಿ (FIR) ದಾಖಲಿಸಲಾಗುವುದು ಎಂದು ಎಚ್ಚರಿಸಲಾಗಿದೆ.
4. ಆಯಾ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ)ಗಳು ವಿದ್ಯಾರ್ಥಿಗಳಿಗೆ ಈ ಕುರಿತು ಅರಿವು ಮೂಡಿಸತಕ್ಕದ್ದು ಹಾಗೂ ಯಾವುದೇ ವಿದ್ಯಾರ್ಥಿಗಳು ಶಾಲಾ ಶೌಚಾಲಯಗಳ ಸ್ವಚ್ಛತೆಯಲ್ಲಿ ತೊಡಗಿಸಿಕೊಂಡಿರುವುದಿಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳಬಹುದಾಗಿರುತ್ತದೆ.

5. ಶಾಲೆಗಳಿಗೆ ಕಾಲ-ಕಾಲಕ್ಕೆ ಖುದ್ದು ಭೇಟಿ ನೀಡಿ ಶಾಲೆಗಳಲ್ಲಿ ಹೆಣ್ಣು ಮಕ್ಕಳು ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಬಳಕೆಗೆ ಯೋಗ್ಯವಾದ ಶೌಚಾಲಯಗಳು ಲಭ್ಯವಿರುವುದನ್ನು ಪರಿಶೀಲಿಸಿ ಮತ್ತು ಶಾಲಾ ಅವಧಿಯಲ್ಲಿ ಈ ಶೌಚಾಲಯಗಳಿಗೆ ಬೀಗ ಹಾಕದೇ ವಿದ್ಯಾರ್ಥಿಗಳ ಉಪಯೋಗಕ್ಕೆ ಅವಕಾಶ ಕಲ್ಪಿಸಿರುವುದನ್ನು ಹಾಗೂ ವಿದ್ಯಾರ್ಥಿಗಳನ್ನು ಶೌಚಾಲಯಗಳ ಸ್ವಚ್ಛತೆಯಲ್ಲಿ ತೊಡಗಿಸಿಕೊಂಡಿರುವುದಿಲ್ಲ ಎಂಬ ಅಂಶಗಳನ್ನು ಖುದ್ದಾಗಿ ಪರಿಶೀಲಿಸಿ ಖಚಿತಪಡಿಸಿಕೊಳ್ಳುವಂತೆ ಶಾಲಾ ಉಸ್ತುವಾರಿ ಹಾಗೂ ಮೇಲ್ವಿಚಾರಣೆಗೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಈ ಮೂಲಕ ಸೂಚಿಸಲಾಗಿದೆ.
6. ಶಾಲೆಯ ಸಂದರ್ಶನದ ವೇಳೆಯಲ್ಲಿ ಒಂದು ವೇಳೆ ವಿದ್ಯಾರ್ಥಿಗಳನ್ನು ಶಾಲಾ ಶೌಚಾಲಯಗಳ ಸ್ವಚ್ಛತೆಯಲ್ಲಿ ತೊಡಗಿಸಿಕೊಂಡಿರುವುದು ಗಮನಕ್ಕೆ ಬಂದಲ್ಲಿ, ಅದಕ್ಕೆ ಕಾರಣರಾದವರ ಮೇಲೆ ಮೇಲ್ಕಂಡಂತೆ ತತ್‌ಕ್ಷಣವೇ ಕ್ರಮವಹಿಸಲು ಅನುವಾಗುವಂತೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಾಗೂ ಉಪನಿರ್ದೇಶಕರು (ಆಡಳಿತ)ರವರಿಗೆ ತಕ್ಷಣ ವರದಿ ಮಾಡಲು ಶಾಲಾ ಉಸ್ತುವಾರಿ ಹಾಗೂ ಮೇಲ್ವಿಚಾರಣೆಗೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ತಿಳಿಸಿದೆ.
7. ಅದರಂತೆ ಇಂತಹ ಪ್ರಕರಣಗಳಲ್ಲಿ ತತ್‌ಕ್ಷಣವೇ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು(ಆಡಳಿತ)ರವರು ಮೇಲೆ ತಿಳಿಸಿರುವಂತೆ ಸಂಬಂಧಿಸಿದವರ ಮೇಲೆ ಜರೂರಾಗಿ ಕ್ರಮವಹಿಸುವಂತೆ ಈ ಮೂಲಕ ಸೂಚಿಸಲಾಗಿದೆ. ತಪ್ಪಿದಲ್ಲಿ ಅಥವಾ ನಿರ್ಲಕ್ಷತನ ತೋರಿದಲ್ಲಿ ಮತ್ತು ಇಂತಹ ಪ್ರಕರಣಗಳು ಮರುಕಳಿಸಿದಲ್ಲಿ ಅದಕ್ಕೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು(ಆಡಳಿತ) ರವರನ್ನೇ ನೇರ ಹೊಣೆಗಾರರನ್ನಾಗಿಸಿ ಇಲಾಖೆ ನಿಯಮಾನುಸಾರ ಶಿಸ್ತು ಕ್ರಮಗಳನ್ನು ಜರುಗಿಸಲಾಗುವುದು ಎಂದು ಎಚ್ಚರಿಸಲಾಗಿದೆ.
8. ಇದೇ ರೀತಿ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿಯು ಸಹ ಇಂತಹ ಯಾವುದೇ ಪ್ರಕರಣಗಳು ಜರುಗದಂತೆ ಸಂಬಂಧಪಟ್ಟ ಶಾಲಾ ಆಡಳಿತ ಮಂಡಳಿಗಳು ಹಾಗೂ ಶಾಲಾ ಮುಖ್ಯಸ್ಥರು ಎಚ್ಚರಿಕೆ ವಹಿಸಲು ತಿಳಿಸಿದೆ.

ಮೇಲ್ಕಂಡ ಎಲ್ಲಾ ಅಂಶಗಳನ್ನು ಹಾಗೂ ಈ ಕುರಿತು ಸರ್ಕಾರದಿಂದ ಮತ್ತು ಇಲಾಖೆಯಿಂದ ಕಾಲ-ಕಾಲಕ್ಕೆ ಹೊರಡಿಸಲಾಗುವ ಸೂಚನೆಗಳನ್ನು ಮತ್ತು ನಿರ್ದೇಶನಗಳನ್ನು ಚಾಚೂ ತಪ್ಪದೇ ಪಾಲಿಸಲು ಹಾಗೂ ವಿದ್ಯಾರ್ಥಿಗಳನ್ನು ಶಾಲಾ ಶೌಚಾಲಯಗಳ ಸ್ವಚ್ಛತೆಯಲ್ಲಿ ತೊಡಗಿಸಿಕೊಳ್ಳುವಂತಹ ಪ್ರಕರಣಗಳು ಮರುಕಳಿಸದಂತೆ ಸೂಕ್ತ ಎಚ್ಚರಿಕೆ ಕ್ರಮಗಳನ್ನು ವಹಿಸುವಂತೆ ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರಿಗೆ ಮತ್ತು ಸಂಬಂಧಿಸಿದ ಎಲ್ಲಾ ಇಲಾಖಾಧಿಕಾರಿಗಳಿಗೆ ಈ ಮೂಲಕ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

20.20.01.2020

ಬಿ.ಬಿ. ಕಾವೇರಿ., ಭಾ.ಆ.ಸೇ
ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

**ಇವರಿಗೆ,**

1. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ-ಕರ್ನಾಟಕ, ಬೆಂಗಳೂರು.
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ / ಧಾರವಾಡ.
3. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕ ವೃಂದದ ಅಧಿಕಾರಿಗಳಿಗೆ / ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ.

4. ಜಂಟಿ ನಿರ್ದೇಶಕರು(ಆಡಳಿತ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
5. ಸಹ ನಿರ್ದೇಶಕರು (ಶಾಲಾ ಶಿಕ್ಷಣ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
6. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹ ನಿರ್ದೇಶಕರಿಗೆ.
7. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಸಹ / ಜಂಟಿ ನಿರ್ದೇಶಕ ವೃಂದದ ಅಧಿಕಾರಿಗಳಿಗೆ.
8. ರಾಜ್ಯದ ಎಲ್ಲಾ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ(ಸಿ.ಟಿ.ಇ.)ಗಳ ಪ್ರಾಂಶುಪಾಲರು ಮತ್ತು ಪದನಿಮಿತ್ತ ಸಹನಿರ್ದೇಶಕರಿಗೆ.
9. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ)ರವರಿಗೆ.
10. ರಾಜ್ಯದ ಎಲ್ಲಾ ಡಯಟ್‌ಗಳ ಪ್ರಾಂಶುಪಾಲರು ಮತ್ತು ಪದನಿಮಿತ್ತ ಉಪನಿರ್ದೇಶಕರು(ಅಭಿವೃದ್ಧಿ) ರವರಿಗೆ.
11. ಉಪನಿರ್ದೇಶಕರು, ಯೋಜನೆ, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
12. ಹಿರಿಯ ಸಹಾಯಕ ನಿರ್ದೇಶಕರು (ಇ–ಆಡಳಿತ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಇಲಾಖಾ ಅಂತರ್ಜಾಲ ತಾಣದಲ್ಲಿ ಅಳವಡಿಸಲು ತಿಳಿಸಿದೆ.
13. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಆಯಾ ಉಪನಿರ್ದೇಶಕರು (ಆಡಳಿತ) ರವರ ಮೂಲಕ).
14. ರಾಜ್ಯದ ಎಲ್ಲಾ ಶಿಕ್ಷಕರ ತರಬೇತಿ ಕೇಂದ್ರಗಳ (ಟಿ.ಟಿ.ಇ.) ಪ್ರಾಂಶುಪಾಲರಿಗೆ (ಆಯಾ ಡಯಟ್ ಪ್ರಾಂಶುಪಾಲರ ಮೂಲಕ).
15. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯಸ್ಥರಿಗೆ (ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).
16. ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ) ಗಳಿಗೆ (ಆಯಾ ಶಾಲಾ ಮುಖ್ಯ ಶಿಕ್ಷಕರ ಮೂಲಕ).
17. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಎಲ್ಲಾ ಶಿಕ್ಷಕರಿಗೆ ಮತ್ತು ಸಿಬ್ಬಂದಿಗಳಿಗೆ (ಆಯಾ ಶಾಲಾ ಮುಖ್ಯ ಶಿಕ್ಷಕರ ಮೂಲಕ).

**ಪ್ರತಿಯನ್ನು,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, 6 ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ತಿಳಿಸಿದೆ.
3. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
6. ಕಛೇರಿ ಪ್ರತಿ.